**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆಃ 1293/2023**

**ಪಿರ್ಯಾದಿದಾರರುಃ** ರಾಜ್ಯ ಪರ ಪೊಲೀಸರು,
ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ

**ವಿರುದ್ಧ**

**ಆರೋಪಿತರುಃ** **ಲೊಕೇಶ ಎ.ಎನ್** ಬಿನ್ ನಾಗಾರಾಜು

**ದೋಷಾರೋಪಣೆ**

**ಶ್ರೀಮತಿ ಕುಸುಮ ವಿ.,** ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಚನ್ನರಾಯಪಟ್ಟಣ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಹೊರಿಸುವ ದೋಷಾರೋಪಣೆ ಏನೆಂದರೆ,

ದಿನಾಂಕಃ 06.11.2023 ರಂದು ಸಂಜೆ 5.35 ಗಂಟೆ ಸಮಯದಲ್ಲಿ, ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ, ವಿವೇಕಾನಂದ ನಗರದಲ್ಲಿ ಸಾಕ್ಷಿ.1 ರವರು ಬಾಡಿಗೆಗೆ ವಾಸ ಇರುವ ಮನೆಯ ಹತ್ತಿರಕ್ಕೆ ಆರೋಪಿಯಾದ ನೀವು ಹೋಗಿ ಸಾಕ್ಷಿ.1 ರವರು ಶಾಂತಿಭಂಗವನ್ನುಂಟುಮಾಡಲಿ ಎಂಬ ಉದ್ದೇಶದಿಂದ, ನಾನು ನಿಮ್ಮ ಮಗಳಿಗೆ ಏನು ಕೊಡವುದಿಲ್ಲ ನೀವು ಅವಳಿಂದ ನನಗೆ ವಿಚ್ಚೇದನ ಕೊಡಿಸಿ, ನೀವೆಲ್ಲಾ ಸರಿಯಿಲ್ಲ ಸೂಳೆ ಮುಂಡೇರು ಎಂದು ಅವಾಚ್ಯ ಶಬ್ದಗಳಿಂದ ಬೈದು, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆ ಕಲಂಃ 504** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**2)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಯಾದ ನೀವು ನಿಮ್ಮ ಸ್ವಇಚ್ಚೆಯಿಂದ ನಿಮ್ಮ ಕೈಗಳಿಂದ ಸಾಕ್ಷಿ.1 ರವರ ಮೈಕೈಗೆ ಹೊಡೆದು ನೋವುಂಟು ಮಾಡಿ ಸಾಮಾನ್ಯ ಸ್ವರೂಪದ ಗಾಯಪಡಿಸಿ, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆ ಕಲಂಃ 323** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**3)** ಅದೇ ದಿನ, ಅದೇ ಸ್ಥಳ, ಅದೇ ಸಮಯದಲ್ಲಿ ಆರೋಪಿಯಾದ ನೀವು ಸಾಕ್ಷಿ.1 ರವರು ಧರಿಸಿದ್ದ ನೈಟಿಯ ಮುಂಭಾಗದ ಎಡಬದಿಯನ್ನು ಹರಿದುಹಾಕಿ,

ಅವರ ಮಾನಕ್ಕೆ ಕುಂದುಂಟುಮಾಡಿ, ಆ ಮೂಲಕ ನೀವು **ಭಾರತೀಯ ದಂಡ ಸಂಹಿತೆ ಕಲಂಃ 354** ರಡಿಯಲ್ಲಿ ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಬರುವಂತೆ ಎಸಗಿರುತ್ತೀರಿ.

**ಪ್ರಶ್ನೆಃ** 1. ಈಗ ನಿಮಗೆ ಓದಿ ಹೇಳಲಾದ ನಿಮ್ಮ ಮೇಲಿನ ದೋಷಾರೋಪಣೆ ನಿಮಗೆ ತಿಳಿಯಿತೆ?

ಆರೋಪಿಯ ಉತ್ತರಃ

**ಪ್ರಶ್ನೆಃ** 2. ನೀವು ನಿಮ್ಮ ತಪ್ಪನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ನಡೆಯಲೆಂದು ಬಯಸುತ್ತೀರಾ?

ಆರೋಪಿಯ ಉತ್ತರಃ

(ಈ ದೋಷರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿ/ಗಳಿಗೆ ತಿಳಿದಿರುವ ಭಾಷೆಯಲ್ಲಿ ಓದಿ ಹೇಳಿ ಕೇಳಲಾಗಿ ಆರೋಪಿ/ಗಳು ನೀಡಿರುವ ಉತ್ತರಗಳನ್ನು ಪಡೆದುಕೊಂಡಿದ್ದು ಅವು ಸರಿ ಇವೆ ಎಂದು ದೃಢೀಕರಿಸಲಾಯಿತು)

ದಿನಾಂಕಃ **20.09.2025**

(ಶ್ರೀಮತಿ ಕುಸುಮ ವಿ.)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.